ವಿಷಯ: ಕೋಳಿ ಸಾಕಾಣಿಕೆದಾರರ ಮಹಾಮಂಡಲದ ಸ್ಥಾಪನೆ.

2774 (3333)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೋಳಿ ಸಾಗಾಣಿಕೆದಾರರ ಸಂಘಗಳು ಅಸ್ತಿತ್ವದಲ್ಲಿವೆಯೇ?

ಆ) ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಇವು ಅಸ್ತಿತ್ವದಲ್ಲಿದೆ?

ಇ) ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳದ ರೀತಿಯಲ್ಲಿ ರಾಜ್ಯದಲ್ಲಿ ಕೋಳಿ ಸಾಕಾಣಿಕೆದಾರರ ಮಹಾಮಂಡಳವನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದವರ ಮುಂದೆ ಇದೆಯೇ?

ಶ್ರೀ ಬಿ.ಬಿ.ನಿಗಂಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):

ಅ) ಇದೆ.

ಆ) 1) ಬೆಂಗಳೂರು ನಗರ ಜಿಲ್ಲೆ (2) ಬೆಂಗಳೂರು ಗ್ರಾಮಾಂತರ ಜಿಲ್ಲೆ (3) ಮೈಸೂರು (4) ಕೋಲಾರ (5) ದಕ್ಷಿಣ ಕನ್ನಡ (6) ಚಿತ್ರದುರ್ಗ (7) ಬಳ್ಳಾರಿ (8) ಧಾರವಾಡ (9) ಬೆಳಗಾವಿ (10) ಗುಲ್ಬರ್ಗಾ (11) ಉತ್ತರ ಕನ್ನಡ (12) ಬಿಜಾಪುರ

ಇ) ಇದೆ. ಅದೇ ಮಾದರಿಯಲ್ಲಿ ಕಾರ್ಯನಿರ್ವಹಿಸಲು ಕರ್ನಾಟಕ ಸಹಕಾರಿ ಕುಕ್ಕುಟ ಮಹಾಮಂಡಳಿಯನ್ನು ರಾಜ್ಯದಲ್ಲಿ ಸ್ಥಾಪಿಸಲಾಗಿದೆ.

ವಿಷಯ: ರಾಜ್ಯದ್ಯಂತ ಮೀನುಗಾರಿಕೆ ಹೆಚ್ಚಿಸಲು ಕ್ರಮ ಕೈಗೊಳ್ಳುವುದು.

2776 (3946)

ಶ್ರೀ ವಿಜಯಶಂಕರ್ ಸಿ.ಹೆಚ್. (ಹುಣಸೂರು): ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯಾದ್ಯಂತ ಮೀನುಗಾರಿಕೆ ಹೆಚ್ಚಿಸುವ ದೃಷ್ಟಿಯಿಂದ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಮತ್ತು ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಹರಾಜು ಮೂಲಕ ಸದರಿ ಕೆರೆಗಳನ್ನು ಫಲಾನುಭವಿಗಳಿಗೆ ವಹಿಸಿಕೊಡುತ್ತಿರುವುದು ನಿಜವೇ?

ಆ) ಸದರಿ ಕೆರೆಗಳನ್ನು ಹರಾಜುಗೊಳಿಸುವಾಗ ಪರಿಶಿಷ್ಟ ವರ್ಗ ಪರಿಶಿಷ್ಟ

ಪಂಗಡಗಳಿಗೆ ತಾಲ್ಲೂಕುವಾರು ಕೆರೆಗಳನ್ನು ಮೀಸಲಿರಿಸಿ ಹರಾಜುಗೊಳಿಸುವ ಪದ್ಧತಿ ಜಾರಿಯಲ್ಲಿದೆಯೇ?

ಇ) ಹಾಗಿಲ್ಲದಿದ್ದಲ್ಲಿ ಸದರಿ ಪದ್ಧತಿಯನ್ನು ಅನುಸರಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

ಶ್ರೀ ಕೆ.ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು):

ಅ) ಹೌದು.

ಆ) ಇಲ್ಲ.

ಇ) ಕೆರೆಗಳ ಮೀನು ಪಾಶುವಾರು ಹಕ್ಕನ್ನು ಟೆಂಡರ್ ಮತ್ತು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡುವ ಪದ್ಧತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕೆರೆಗಳನ್ನು ಮೀಸಲಿರಿಸುವುದು ಸಾಧ್ಯವಾಗುವುದಿಲ್ಲ.

ಆದರೆ, ಕೆರೆಗಳ ಮೀನು ಪಾಶುವಾರು ಹಕ್ಕನ್ನು ಗುತ್ತಿಗೆ ಮೇಲೆ ನೀಡುವಾಗ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀನುಗಾರರ ಸಹಕಾರ ಸಂಘಗಳಿಗೆ ಆದ್ಯತೆ ಮೇಲೆ ನೀಡಲಾಗುತ್ತಿದೆ. ಹಾಗೂ ವಿಶೇಷ ಘಟಕ ಯೋಜನೆಯಡಿ ಮತ್ತು ಗಿರಿಜನ ಉಪಯೋಜನೆಯಡಿ ತರಬೇತಿ ಹೊಂದಿದ ಫಲಾನುಭವಿಗಳಿಗೂ ಆದ್ಯತೆ ಮೇಲೆ ರಿಯಾಯಿತಿದರದಲ್ಲಿ ಗುತ್ತಿಗೆ ಮೇಲೆ ನೀಡಲಾಗುತ್ತಿದೆ.

ವಿಷಯ: 1995ರಿಂದ ಜೂನ್ 1998ರ ಆರ್ಥಿಕ ವರ್ಷದಲ್ಲಿ ಬಿಡುಗಡೆ ಮಾಡಲಾದ ಅಭಿವೃದ್ಧಿ ಸಹಾಯಧನ

2777 (3693)

ಶ್ರೀ ಎನ್.ರಾಜೇಂದ್ರನ್ (ಕೆ.ಜಿ.ಎಫ್): ಮಾನ್ಯ ಉಪ ಮುಖ್ಯ ಮಂತ್ರಿಗಳು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1995-96, 1996-97 ಮತ್ತು ಜೂನ್ 1998ರ ಆರ್ಥಿಕ ವರ್ಷದ ಅವಧಿಯಲ್ಲಿ ಬಿಡುಗಡೆ ಮಾಡಲಾದ ಅಭಿವೃದ್ಧಿ ಸಹಾಯಧನ ಹಾಗೂ ಈ ಸಹಾಯಧನವನ್ನು ಯಾವ ಅಭಿವೃದ್ಧಿ ಕಾರ್ಯಕ್ಕಾಗಿ ಬಿಡುಗಡೆ ಮಾಡಲಾಗಿದೆ - ಕ್ಷೇತ್ರವಾರು ಹಾಗೂ ಅಸೆಂಬ್ಲಿವಾರು ಮಾಹಿತಿಯನ್ನು ಒದಗಿಸುವುದು.

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯಮಂತ್ರಿಗಳು):

1995-96 ಹಾಗೂ 1996-97ನೇ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅಭಿವೃದ್ಧಿ